ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.
URL : www.anekal-pa.in

## ಪ್ರಾರಂಭಿಕ ಪ್ರಮಾಣ ಪತ್ರ

ಸಂಖ್ಯೆ: ಆಯೋಪ್ರಾ/ಸಿಸಿ/186/2014-15 ದಿನಾಂಕ:

**ಶ್ರೀಮತಿ ಪಾರ್ವತಮ್ಮ ಇವರ ಪರವಾಗಿ ಜಿಪಿಎ ದಾರರಾರು ಮೆ: ಐಕಾನ್ ಹ್ಯಾಪಿಲಿವಿಂಗ್ ಪ್ರಾಜೆಕ್ಟ್ಸ್ ಪರವಾಗಿ ಪಾಲುದಾರರಾದ ಶ್ರೀ ರಾಜಶೇಖರ್ ಗೌರಿನೇನಿ**, ಇವರು ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಕಮ್ಮಸಂದ್ರ ಗ್ರಾಮದ ಸ.ನಂ.98/2ರಲ್ಲಿನ ಒಟ್ಟು 01ಎಕರೆ 39ಗುಂಟೆ ಪ್ರದೇಶಕ್ಕೆ ಅನುಮೋದಿಸಿದ ಒಂಟಿ ನಿವೇಶನ ನಕ್ಷೆಯಲ್ಲಿನ **ಖಾತೆ ಸಂಖ್ಯೆ:2675/2950/98/2**ರಲ್ಲಿನ ಬ್ಲಾಕ್-1ರಲ್ಲಿ ಸ್ಟಿಲ್ಟ್+ನೆಲ+ಮೇಲಿನ ಮೂರು ಮಹಡಿಗಳು ಮತ್ತು ಬ್ಲಾಕ್-2ರಲ್ಲಿ ಸ್ಟಿಲ್ಟ್+ನೆಲ+ಮೇಲಿನ ಮೂರು ಮಹಡಿಗಳ **ಒಟ್ಟು 18752.05ಚ.ಮೀ.** ವಿಸ್ತೀರ್ಣದಲ್ಲಿ ಒಟ್ಟು **176ಘಟಕ**ಗಳ ವಸತಿ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಅನುಮೋದನಾ ಶುಲ್ಕ **ರೂ.96,000/- ಡಿ.ಡಿ.ನಂ.700339** ಹಾಗೂ ಭದ್ರತಾ ಠೇವಣಿ ಶುಲ್ಕ **ರೂ.9,38,000/- ಡಿ.ಡಿ. ನಂ.700338**ಗಳ **ರಸೀದಿ ಸಂಖ್ಯೆ:300886** ದಿನಾಂಕ:18-09-2014ರಂದು ಪಾವತಿಸಲಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(1)ರನ್ವಯ ಈ ಕೆಳಕಂಡ ಷರತ್ತುಗೊಳಪಡಿಸಿ ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ.

### ಷರತ್ತುಗಳು

1) ಮೇಲ್ಕಂಡ ನಿವೇಶನದಲ್ಲಿ ಕಟ್ಟುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು, ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ಕಟ್ಟಡ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿರುತ್ತದೆ.
3) ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.
4) ಕಟ್ಟಡ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ, ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
5) ಈ ಪ್ರಾರಂಭಿಕ ಪ್ರಮಾಣ ಪತ್ರವು **ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ.** ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
6) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.
7) ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
8) ಕಟ್ಟಡ ನಡುಜಾಗ ಪ್ರದೇಶದಲ್ಲಿ ಮರಗಳನ್ನು ಬೆಳೆಸತಕ್ಕದ್ದು.
9) ಕಟ್ಟಡ ನಿರ್ಮಾಣ ಸಾಮಾಗ್ರಿಗಳನ್ನು ರಸ್ತೆಯಲ್ಲಿ/ಚರಂಡಿ ಮೇಲೆ ಅಥವಾ ಯಾವುದೇ ಸಾರ್ವಜನಿಕ ಪ್ರದೇಶದಲ್ಲಿ ಶೇಖರಣೆ ಮಾಡಬಾರದು,ಈ ಬಗ್ಗೆ ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.

ಪು.ತಿ.ನೋ...

10)ನಿವೇಶನದ ಆವರಣದೊಳಗೆ ಮಳೆ ನೀರಿನ ಕೊಯ್ಲಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

11) ಸೋಲಾರ್ ವಾಟರ್ ಹಿಟರ್‌ನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

12)ಪ್ರಸ್ತಾವಿತನಿವೇಶನವು ಯಾವುದೇಭೂಸ್ವಾಧೀನಕ್ಕೆ ಒಳಪಟ್ಟದ್ದಲ್ಲಿಈ ಪ್ರಾಧಿಕಾರವು ಜವಬ್ದಾರಿಯಾರುವುದಿಲ್ಲ.

13) ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.

14)ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ, ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರುವ, ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ/ದಾಖಲೆಗಳು, ತಪ್ಪಾಗಿದ್ದಲ್ಲಿ/ಪೋರ್ಜರಿ ಆಗಿದ್ದಲ್ಲಿ/ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಕಟ್ಟಡ ನಕ್ಷೆ ಅನುಮೋದನೆಯು ಸ್ವಯಂಚಾಲಿತವಾಗಿ ರದ್ದಾಗುವ ನಿಬಂಧನ -ಗೊಳ್ಳಪಟ್ಟಿರುತ್ತದೆ.

15)ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಪತ್ರ ಸಂಖ್ಯೆ:PCB/96/CNP/14/H-782, ದಿನಾಂಕ:28-08-2014ರಲ್ಲಿನ ನಿಬಂಧನೆಗಳನ್ನು ಚಾಚುತಪ್ಪದೇ ಪಾಲಿಸತಕ್ಕದ್ದು.

16)ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮುನ್ನ ಹೆಬ್ಬಗೋಡಿ ಗ್ರಾಮ ಪಂಚಾಯಿತಿಯಿಂದ ಪರವಾನಗೆಯನ್ನು ಪಡೆಯತಕ್ಕದ್ದು.

17) ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿದೆ;

| **ನಡುಜಾಗ** | **ವಲಯ ನಿಯಮಾವಳಿಯಂತೆ** | **ನಕ್ಷೆಯಂತೆ** |
|---|---|---|
| ಮುಂಭಾಗ | 4.50 ಮೀ. | 4.50 ಮೀ. |
| ಹಿಂಭಾಗ | 4.50 ಮೀ. | 4.50 ಮೀ. |
| ಎಡಭಾಗ | 4.50 ಮೀ. | 6.00 ಮೀ. |
| ಬಲಭಾಗ | 4.50 ಮೀ. | 5.00 ಮೀ. |
| ನೆಲ ವಿಸ್ತೀರ್ಣ ಪ್ರಮಾಣ | 1.75 | 1.74 |
| ಕಟ್ಟಡದ ಅಂತಸ್ತುಗಳು | - | ಬ್ಲಾಕ್-1 ಮತ್ತು ಬ್ಲಾಕ್-2ರಲ್ಲಿ ಸ್ಟಿಲ್ಟ್+ನೆಲ+ಮೇಲಿನ ಮೂರು ಮಹಡಿಗಳು ಮಾತ್ರ |
| ವಾಹನ ನಿಲುಗಡೆ ಜಾಗ | 176 No's | 176 No's |

ಪು.ತಿ.ನೋ...

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

6/8/2014

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ**
**ನಿರ್ದೇಶಕರು ಹಾಗೂ ಸದಸ್ಯ- ಕಾರ್ಯದರ್ಶಿ,**
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ಇವರಿಗೆ,

**ಶ್ರೀಮತಿ ಪಾರ್ವತಮ್ಮ ಇವರ ಪರವಾಗಿ ಜಿಪಿಎ ದಾರರಾರು**
**ಮೆ: ಐಕಾನ್ ಹ್ಯಾಪಿಲಿವಿಂಗ್ ಪ್ರಾಜೆಕ್ಟ್ಸ ಪರವಾಗಿ**
**ಪಾಲುದಾರರಾದ ಶ್ರೀ ರಾಜಶೇಖರ್ ಗೌರಿನೇನಿ,**
ನಂ.548, 2ನೇ ಮಹಡಿ, 22ನೇ ಕ್ರಾಸ್,
14ನೇ ಮೈನ್, 3ನೇ ಸೆಕ್ಟರ್, HSR ಲೇಔಟ್,
ಬೆಂಗಳೂರು - 560 102.